RNU AIR DHARWAD

OCTOBER 29, 2026

AKASHAVANI - DHARWAD

PRADESH SAMACHARA (KANNADA) 07.05 A.M.

<><><>

ಮುಖ್ಯಾಂಶಗಳು;

- **ವಿಧಾನ ಪರಿ ತ್ತಿನ ಪದವೀಧರ ಹಾಗೂ ಶಿಕ್ಷಕರ ಕ್ಷೇತ್ರಗಳ ಚುನಾವಣೆ; ಮತದಾರರ ತೀರ್ಪನ್ನು ಗೌರವದಿಂದ ಸ್ವೀಕರಿಸುತ್ತೇವೆ – ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್.**

- **ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದಿಂದ ಲೆಕ್ಕಪರಿಶೋಧನೆಗೆ ಸಂಬಂಧಿಸಿದ ನೂತನ ಕೋರ್ಸ್ – ಸಚಿವ ಲಕ್ಷ್ಮಣ ಸವದಿ.**

- **ದಾವಣಗೆರೆ ಹಾಗೂ ಚಿತ್ರದುರ್ಗ ಜಿಲ್ಲೆಗಳಿಗೆ ಪ್ರತ್ಯೇಕ ಹಾಲು ಒಕ್ಕೂಟ 'ದಾಚಿಮುಲ್' ಸ್ಥಾಪನೆ – ಸಚಿವ ಕೆ.ಎಸ್. ಬಸವಂತಪ್ಪ.**

- **ಒಂದು ವ ರ್ಷದ ಬಳಿಕ ಹಾಸನದ ಅಧಿದೇವತೆ ಹಾಸನಾಂಬೆಯ ದರ್ಶನ ಇಂದು ಆರಂಭ.**

ವಾರ್ತೆಗಳ ವಿವರ...

<><><>

ವಿಧಾನ ಪರಿ ತ್ತಿನ ಪದವೀಧರರ ಹಾಗೂ ಶಿಕ್ಷಕರ ಕ್ಷೇತ್ರಗಳ ಚುನಾವಣೆಯಲ್ಲಿ ಮತದಾರರು ನೀಡಿರುವ ತೀರ್ಪನ್ನು ಗೌರವದಿಂದ ಸ್ವೀಕರಿಸುತ್ತೇವೆ. ಚುನಾವಣೆಯ ಫಲಿತಾಂಶದ ಸಂದೇಶವನ್ನು ಕೂಲಂಕ ವಾಗಿ ಅಧ್ಯಯನ ಮಾಡಿ, ಅಗತ್ಯ ಬದಲಾವಣೆಗಳನ್ನು ಮಾಡಿಕೊಳ್ಳುತ್ತೇವೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಚುನಾವಣೆಯಲ್ಲಿ ಕಾಂಗ್ರೆಸ್‌ಗೆ ಎರಡು ಸ್ಥಾನಗಳು ಲಭಿಸುವ ನಿರೀಕ್ಷೆ ಇತ್ತು. ಆದರೆ ಅದು ಸಾಧ್ಯವಾಗಿಲ್ಲ. ಪಕ್ಷ ಸೋತಿದ್ದರೂ ಉತ್ತಮ ಮತಗಳು ಬಂದಿವೆ. ಬೆಂಗಳೂರು ಶಿಕ್ಷಕರ ಕ್ಷೇತ್ರದ ಫಲಿತಾಂಶವನ್ನು ನಿರೀಕ್ಷಿಸಿರಲಿಲ್ಲ. ಈ ಕುರಿತು ಪರಿಶೀಲನೆ ನಡೆಸಲಾಗುವುದು ಎಂದರು. ಬಿಜೆಪಿ ಮತ್ತು ಜೆಡಿಎಸ್ ನಾಯಕರು ಈ ಫಲಿತಾಂಶವನ್ನು ಭವಿ ್ಯದ ಚುನಾವಣೆಯ ಮುನ್ಸೂಚನೆ ಎಂದು ಹೇಳುತ್ತಿರುವುದಕ್ಕೆ ಪ್ರತಿಕ್ರಿಯಿಸಿದ ಅವರು, ಚನ್ನಪಟ್ಟಣ ಮತ್ತು ಶಿಗ್ಗಾಂವಿ ಕ್ಷೇತ್ರಗಳ

ಫಲಿತಾಂಶಗಳ ಬಗ್ಗೆಯೂ ಅವರು ಉತ್ತರಿಸಬೇಕು. ಅವುಗಳನ್ನೂ ಮುನ್ಸೂಚನೆ ಎಂದು ಪರಿಗಣಿಸುತ್ತಾರೆಯೇ ಎಂದು ಪ್ರಶ್ನಿಸಿದರು. ಚುನಾವಣೆಯ ಫಲಿತಾಂಶದಿಂದ ಕಲಿಯಬೇಕಾದ ಹಲವು ವಿಚಾರಗಳಿವೆ. ಅವುಗಳನ್ನು ಪರಿಶೀಲಿಸಿ, ಪಕ್ಷದ ಕಾರ್ಯಕರ್ತರನ್ನು ಹೇಗೆ ಸಜ್ಜುಗೊಳಿಸಬೇಕು ಎಂಬುದು ನಮಗೆ ತಿಳಿದಿದೆ ಎಂದು ಹೇಳಿದರು.

<><><>

ರಾಜ್ಯ ವಿಧಾನಪರಿ ತ್ತಿನ ನಾಲ್ಕು ಸ್ಥಾನಗಳಿಗೆ ನಡೆದ ಚುನಾವಣೆಯಲ್ಲಿ, ಎನ್‌ಡಿಎ ಮೈತ್ರಿಕೂಟದ ಅಭ್ಯರ್ಥಿಗಳು ಎಲ್ಲ ಕ್ಷೇತ್ರಗಳಲ್ಲಿ ಗೆಲುವು ಸಾಧಿಸಿದ್ದು, ಭ ್ಟಾಚಾರದಿಂದ ಕೂಡಿದ ಹಾಗೂ ಅಭಿವೃದ್ಧಿಶೂನ್ಯ ಕಾಂಗ್ರೆಸ್ ಸರ್ಕಾರವನ್ನು, ಪ್ರಜ್ಞಾವಂತ ಮತದಾರರು ತಿರಸ್ಕರಿಸಿದ್ದಾರೆ ಎಂದು, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಹೇಳಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಈ ಕುರಿತು ಹೇಳಿಕೆ ನೀಡಿರುವ ಅವರು, ಈ ಚುನಾವಣಾ ಫಲಿತಾಂಶವು ರಾಷ್ಟ್ರದಲ್ಲಿ ಸಾಂವಿಧಾನಿಕ ಸಂಸ್ಥೆಗಳ ಮೇಲೆ ಸುಳ್ಳು ಆರೋಪಗಳನ್ನು ಮಾಡುತ್ತಿರುವ ಶಕ್ತಿಗಳ ವಿರುದ್ಧ, ಜನತೆ ನೀಡಿರುವ ತೀರ್ಪಾಗಿದೆ. ಅಲ್ಲದೇ, ರಾಜ್ಯದಲ್ಲಿ ನಡೆಯಲಿರುವ 2028ರ ವಿಧಾನಸಭಾ ಚುನಾವಣೆಗೆ ಇದು, ಸ್ಪ ್ಟ ದಿಕ್ಸೂಚಿಯಾಗಿದೆ ಎಂದು ತಿಳಿಸಿದ್ದಾರೆ. ಮತಕಳವು, ಇ.ವಿ.ಎಂ. ಬಗೆಗಿನ ಸಂಶಯ, ಎಸ್.ಐ.ಆರ್. ಪ್ರಕ್ರಿಯೆ ವಿರುದ್ಧ ಟೀಕೆ ಹಾಗೂ ಚುನಾವಣಾ ಆಯೋಗದ ಬಗ್ಗೆ ಅಪಪ್ರಚಾರ ಮಾಡುತ್ತಿದ್ದ ಕಾಂಗ್ರೆಸ್ ನಾಯಕರಿಗೆ, ಪದವೀಧರ ಹಾಗೂ ಶಿಕ್ಷಕ ಮತದಾರರು ತಕ್ಕ ಉತ್ತರವನ್ನೇ ನೀಡಿದ್ದಾರೆ. ಇನ್ನು ಮುಂದಾದರು ಕಾಂಗ್ರೆಸ್ ಪಕ್ಷದ ನಾಯಕರು, ನೈಜ ಪ್ರಜಾಪ್ರಭುತ್ವ ವ್ಯವಸ್ಥೆ, ಪಾರದರ್ಶಕ ಚುನಾವಣಾ ವ್ಯವಸ್ಥೆಯನ್ನು ಒಪ್ಪಿಕೊಂಡು, ಭಾರತದ ಸಾಂವಿಧಾನಿಕ ವ್ಯವಸ್ಥೆಯನ್ನು ಗೌರವಿಸಲಿ ಎಂದು ವಿಜಯೇಂದ್ರ ಹೇಳಿದ್ದಾರೆ.

<><><>

ಕರ್ನಾಟಕ, ಮಹಾರಾಷ್ಟ್ರ, ಬಿಹಾರ, ಉತ್ತರಪ್ರದೇಶ ರಾಜ್ಯಗಳಲ್ಲಿ 28 ವಿಧಾನಪರಿಷತ್ ಸ್ಥಾನಗಳಿಗೆ ಚುನಾವಣೆಯಲ್ಲಿ, ಕಾಂಗ್ರೆಸ್ ಪಕ್ಷ ಶೂನ್ಯ ಸಂಪಾದನೆ ಮಾಡಿದ್ದು, ಕರ್ನಾಟಕದಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಅರ್ಹ ಮತದಾರರು ಎಚ್ಚರಿಕೆಯ ಸಂದೇಶ ರವಾನಿಸಿದ್ದಾರೆ ಎಂದು, ಕೇಂದ್ರ ಶಿಕ್ಷಣ ಸಚಿವ ಪ್ರಲ್ಹಾದ ಜೋಶಿ, ಹೇಳಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಅವರು, ವೋಟ್ ಚೋರಿ ಎನ್ನುವ ಸುಳ್ಳು ಕಥೆ ಸೃಷ್ಟಿಸಿ, ಪ್ರಜಾಪ್ರಭುತ್ವದ ಸಾಂವಿಧಾನಿಕ ಸಂಸ್ಥೆಗಳನ್ನು ಪ್ರಶ್ನಿಸುವ ಕಾಂಗ್ರೆಸ್ ಪಕ್ಷ, ಕರ್ನಾಟಕದಲ್ಲಿ ಆಡಳಿತದಲ್ಲಿದ್ದರೂ, ಒಂದೂ ಸ್ಥಾನವನ್ನು ಗೆಲ್ಲಲು ಸಾಧ್ಯವಾಗಿಲ್ಲ. ವಿದ್ಯುನ್ಮಾನ ಮತಯಂತ್ರ ಬಳಸಲಿ ಅಥವಾ ಮತಪತ್ರವನ್ನೇ ಬಳಸಲಿ, ಫಲಿತಾಂಶದಲ್ಲಿ ಯಾವುದೇ ಬದಲಾವಣೆಯಾಗಿಲ್ಲ. ಇದರಿಂದ ಕಾಂಗ್ರೆಸ್ ಪಕ್ಷ ಕಲಿಯಬೇಕಿದೆ ಎಂದು ಹೇಳಿದರು. ಕಾಂಗ್ರೆಸ್ ಪಕ್ಷ ಪದೇ ಪದೇ ವಿದ್ಯುನ್ಮಾನ ಮತಯಂತ್ರದ ಬಗ್ಗೆ ಮಾತನಾಡುತ್ತದೆ. ಆದರೆ, ಮತಪತ್ರ ಬಳಸಿ ಚುನಾವಣೆ ನಡೆಸಿದ್ದರೂ, ಫಲಿತಾಂಶ ಮಾತ್ರ ಬದಲಾಗಿಲ್ಲ. ಚುನಾವಣಾ ಫಲಿತಾಂಶ ಬಂದಾಗಲೆಲ್ಲ, ವ್ಯವಸ್ಥೆಯನ್ನು ಪದೇ ಪದೇ ದೂಷಿಸುವ ಕಾಂಗ್ರೆಸ್ ಪಕ್ಷದ ನಾಯಕತ್ವ ಇನ್ನಾದರೂ ವ್ಯವಸ್ಥೆ ಮೇಲಿನ ಆರೋಪ ಮಾಡುವುದನ್ನು ಬಿಟ್ಟು, ಸಾಲು-ಸಾಲು ಸೋಲುಗಳ ಮಧ್ಯೆ, ಆತ್ಮಾವಲೋಕನ ಮಾಡಿಕೊಳ್ಳಲಿ ಎಂದು ತಿಳಿಸಿದ್ದಾರೆ.

<><><>

ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳವು ಸಹಕಾರ ಇಲಾಖೆಯ ಸಹಯೋಗದಲ್ಲಿ ಸಹಕಾರ ಕ್ಷೇತ್ರದಲ್ಲಿ ಲೆಕ್ಕಪರಿಶೋಧನೆಗೆ ಸಂಬಂಧಿಸಿದ ವೃತ್ತಿಪರ ಜ್ಞಾನ ಮತ್ತು ಪ್ರಾಯೋಗಿಕ ಕೌಶಲ್ಯಗಳನ್ನು ಅಭಿವೃದ್ಧಿಪಡಿಸುವ ಉದ್ದೇಶದಿಂದ ನವೆಂಬರ್ 14 ರಿಂದ ಆರು ತಿಂಗಳ ಅವಧಿಯ 'ಡಿಪ್ಲೊಮಾ ಇನ್ ಕೋ-ಅಪರೇಟಿವ್ ಅಡಿಟ್" (DCA) ಎಂಬ ನೂತನ ಕೋರ್ಸ್ ಪ್ರಾರಂಭಿಸುತ್ತಿದೆ ಎಂದು ಸಹಕಾರ ಸಚಿವ ಲಕ್ಷ್ಮಣ ಸವದಿ ಅವರು ತಿಳಿಸಿದ್ದಾರೆ. ಕರ್ನಾಟಕ ಸಹಕಾರ ಮಹಾಮಂಡಳದಲ್ಲಿ ಹಮ್ಮಿಕೊಳ್ಳಲಾಗಿದ್ದ ಪತ್ರಿಕಾ ಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಸಚಿವರು, ಈ ಕೋರ್ಸ್‌ನಲ್ಲಿ ಸಹಕಾರ ಸಂಘಗಳ ಲೆಕ್ಕಪತ್ರ ನಿರ್ವಹಣೆ, ಹಣಕಾಸು ನಿರ್ವಹಣೆ. ಲೆಕ್ಕಪರಿಶೋಧನಾ ವಿಧಾನಗಳು, ಸಹಕಾರ ಕಾಯ್ದೆ ಮತ್ತು ನಿಯಮಗಳು, ಲೆಕ್ಕಪತ್ರಗಳ ಪರಿಶೀಲನೆ. ಲೆಕ್ಕಪರಿಶೋಧನಾ ವರದಿ ತಯಾರಿಕೆ ಹಾಗೂ ಟ್ಯಾಲಿ ಮತ್ತು ಆಧುನಿಕ ಡಿಜಿಟಲ್ ಲೆಕ್ಕಪತ್ರ ನಿರ್ವಹಣೆಯ ಕುರಿತು ತರಬೇತಿ ನೀಡಲಾಗುತ್ತದೆ. ಜೊತೆಗೆ, ಹಣಕಾಸಿನ ವ್ಯವಹಾರಗಳಲ್ಲಿನ ಲೋಪದೋ 'ಗಳನ್ನು ಗುರುತಿಸುವುದು. ಕಾನೂನುಬದ್ಧ ನಿಯಮಗಳ ಪಾಲನೆ ಮತ್ತು ಪಾರದರ್ಶಕತೆಯನ್ನು ಕಾಪಾಡುವ ಕುರಿತು ಪ್ರಾಯೋಗಿಕ ಜ್ಞಾನವನ್ನು ಒದಗಿಸಲಾಗುವುದು ಎಂದರು.

<><><>

ಈಗ ಪ್ರಕಟಣೆ ಬಳಿಕ ಪ್ರದೇಶ ಸಮಾಚಾರ ಮುಂದುವರಿಯುವುದು

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ

<><><>

ದಾವಣಗೆರೆ ಹಾಗೂ ಚಿತ್ರದುರ್ಗ ಜಿಲ್ಲೆಗಳಿಗೆ ಪ್ರತ್ಯೇಕ ಹಾಲು ಒಕ್ಕೂಟ 'ದಾಚಿಮುಲ್' ಸ್ಥಾಪಿಸುವ ಸಂಬಂಧ ಉದ್ದೇಶಿತ ಕಾಮಗಾರಿಗಳನ್ನು ಅತ್ಯಂತ ಯೋಜಿತ ಹಾಗೂ ವ್ಯವಸ್ಥಿತ ರೀತಿಯಲ್ಲಿ ಕೈಗೊಳ್ಳುವಂತೆ ವಿಜಯನಗರ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಸ್. ಬಸವಂತಪ್ಪ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ದಾವಣಗೆರೆ ಹಾಲು ಒಕ್ಕೂಟ ಕೇಂದ್ರಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಅವರು, ಹಾಲಿನ ಸಂಗ್ರಹಣೆಯಿಂದ ಹಿಡಿದು ಗ್ರಾಹಕರಿಗೆ ತಲುಪಿಸುವವರೆಗಿನ ವಿವಿಧ ಹಂತಗಳ ಕಾರ್ಯವೈಖರಿಯನ್ನು ವೀಕ್ಷಿಸಿದರು. ಬಳಿಕ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ನೂತನ ಒಕ್ಕೂಟ ಸ್ಥಾಪನೆಯ ಸಿದ್ಧತೆಗಳ ಕುರಿತು ಸುದೀರ್ಘ ಚರ್ಚೆ ನಡೆಸಿದರು. ಮಾಯಕೊಂಡ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ಎಚ್.ಕಲ್ಪನಹಳ್ಳಿ ಸಮೀಪ ನೂತನವಾಗಿ ನಿರ್ಮಿಸಲು ಉದ್ದೇಶಿಸಿರುವ ಹಾಲು ಒಕ್ಕೂಟದ ಕಟ್ಟಡ ನಿರ್ಮಾಣ ಕಾಮಗಾರಿಯ ಯೋಜನೆ, ಅಗತ್ಯ ಪೂರ್ವಸಿದ್ಧತೆಗಳು ಹಾಗೂ ಸಂಬಂಧಿತ ಪ್ರಕ್ರಿಯೆಗಳ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದರು.

<><><>

ಒಂದು ವ ರ್ಷದ ಬಳಿಕ ಹಾಸನದ ಅಧಿದೇವತೆ ಹಾಸನಾಂಬೆಯ ಗರ್ಭಗುಡಿಯ ಬಾಗಿಲು ಇಂದು ಮಧ್ಯಾಹ್ನ 12 ಗಂಟೆ ನಂತರ ಶಾಸ್ತ್ರೋಕ್ತವಾಗಿ ತೆರೆಯಲಿದೆ ಎಂದು ಅಬಕಾರಿ ಮತ್ತು ಹಾಸನ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಂ.ಶಿವಲಿಂಗೇಗೌಡ ತಿಳಿಸಿದ್ದಾರೆ. ಹಾಸನದಲ್ಲಿ ಸುದ್ದಿಗೋಷ್ಠಿಯಲ್ಲಿ ಜಾತ್ರಾ ಮಹೋತ್ಸವ ಸಿದ್ಧತೆ ಮತ್ತು ಈ ಅವಧಿಯಲ್ಲಿ ಹಮ್ಮಿಕೊಳ್ಳಲಿರುವ ಸಾಂಸ್ಕೃತಿಕ ಹಾಗೂ ಕ್ರೀಡಾ ಕಾರ್ಯಕ್ರಮಗಳ ಬಗ್ಗೆ ಅವರು ಮಾಹಿತಿ ನೀಡಿದರು. ಶ್ರೀ ಆದಿಚುಂಚನಗಿರಿ ಮಹಾ ಸಂಸ್ಥಾನ ಮಠದ ಡಾ. ಶ್ರೀ ನಿರ್ಮಲಾನಂದ ನಾಥ ಮಹಾಸ್ವಾಮೀಜಿ ಮತ್ತು ತುಮಕೂರು ಸಿದ್ದಗಂಗಾ ಮಠದ ಶ್ರೀ ಸಿದ್ಧಲಿಂಗ ಮಹಾ ಸ್ವಾಮಿಗಳು ಉದ್ಘಾಟನೆ ನೆರವೇರಿಸುವರು ಎಂದರು.

<><><>

ಉತ್ತರ ಕನ್ನಡ ಜಿಲ್ಲೆಯ ಕುಮಟಾ ತಾಲೂಕಿನ ತದಡಿ ಮೀನುಗಾರಿಕಾ ಬಂದರಿನಲ್ಲಿ ಉಸಿರುಗಟ್ಟಿ ಮೃತಪಟ್ಟ ಮೂವರು ಮೀನುಗಾರರ ಕುಟುಂಬಗಳಿಗೆ ಮೀನುಗಾರಿಕಾ ಖಾತೆ ಸಚಿವ ಬಸವಂತಪ್ಪ ಅವರು ತಲಾ 10 ಲಕ್ಷ ರೂಪಾಯಿಗಳ ಪರಿಹಾರದ ಚೆಕ್ ವಿತರಿಸಿದರು. ತದಡಿ ಬಂದರಿನಲ್ಲಿ ಇತ್ತೀಚೆಗೆ ಬೋಟಿನಿಂದ ಮೀನುಗಳನ್ನು ಖಾಲಿ ಮಾಡುವ ಸಂದರ್ಭದಲ್ಲಿ ಬೋಟಿನ ಒಳಭಾಗದಲ್ಲಿ ಉಸಿರುಗಟ್ಟಿ ಮೂವರು ಮೀನುಗಾರರು ಮೃತಪಟ್ಟಿದ್ದರು. ಈ ದುರಂತದಿಂದ ಮೀನುಗಾರಿಕಾ ವಲಯದಲ್ಲಿ ಶೋಕದ ವಾತಾವರಣ ನಿರ್ಮಾಣವಾಗಿದ್ದು, ಮೃತರ ಕುಟುಂಬಗಳು ಆಧಾರ ಕಳೆದುಕೊಂಡು ಸಂಕ ‘ಟಕ್ಕೆ ಸಿಲುಕಿವೆ. ಘಟನೆಯ ಹಿನ್ನೆಲೆಯಲ್ಲಿ ಸಚಿವರು ಮೃತರ ಕುಟುಂಬಗಳನ್ನು ಭೇಟಿ ಮಾಡಿ ಸಾಂತ್ವನ ಹೇಳಿ ಪರಿಹಾರ ವಿತರಿಸಿದ್ದಾರೆ.

<><><>

ಜಿಲ್ಲೆಯ ಯುವಕರಿಗೆ ಪ್ರಸ್ತುತ ಉದ್ಯೋಗ ಮಾರುಕಟ್ಟೆಗೆ ಅಗತ್ಯಕ್ಕೆ ಅನುಗುಣವಾಗಿ ಕೌಶಲ್ಯ ತರಬೇತಿ ನೀಡುವ ಮೂಲಕ ಹೆಚ್ಚಿನ ಉದ್ಯೋಗಾವಕಾಶಗಳನ್ನು ಕಲ್ಪಿಸಬೇಕೆಂದು ಬಾಗಲಕೋಟೆ ಜಿಲ್ಲಾಧಿಕಾರಿ ಸಂಗಪ್ಪ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಜಿಲ್ಲಾ ಕೌಶಲ್ಯ ಮಿ ‘ನ್ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು; ಜಿಲ್ಲೆಯಲ್ಲಿ ವಿವಿಧ ಇಲಾಖೆಗಳ ಮೂಲಕ

ಅನು ಾನಗೊಳ್ಳುತ್ತಿರುವ ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮಗಳ ಪ್ರಗತಿ, ತರಬೇತಿ ಪಡೆದ ಅಭ್ಯರ್ಥಿಗಳ ಸಂಖ್ಯೆ, ಉದ್ಯೋಗ ಹಾಗೂ ಸ್ವಯಂ ಉದ್ಯೋಗ ಪಡೆದವರ ವಿವರಗಳ ಕುರಿತು ಸಭೆಯಲ್ಲಿ ಪರಿಶೀಲನೆ ನಡೆಸಿದರು.

<><><>

ದೇಶದಾದ್ಯಂತ ಮುಂಬರುವ ಪ್ರಮುಖ ಸ್ಪರ್ಧಾತ್ಮಕ ಹಾಗೂ ಪ್ರವೇಶ ಪರೀಕ್ಷೆಗಳನ್ನು ನ್ಯಾಯಯುತ, ಸುರಕ್ಷಿತ ಮತ್ತು ಪಾರದರ್ಶಕವಾಗಿ ನಡೆಸಲು ರಾಷ್ಟ್ರೀಯ ಪರೀಕ್ಷಾ ಸಂಸ್ಥೆ NTA ಪ್ರಮುಖ ಹೆಜ್ಜೆಯನ್ನಿಟ್ಟಿದೆ. ಈ ಕುರಿತು ಎನ್‌ಟಿಎ ಪ್ರಧಾನ ನಿರ್ದೇಶಕ ಅಭಿಷೇಕ್ ಸಿಂಗ್ ಅವರು ದೇಶದ ಎಲ್ಲಾ ಜಿಲ್ಲಾಧಿಕಾರಿಗಳಿಗೆ/ಜಿಲ್ಲಾ ಮ್ಯಾಜಿಸ್ಟ್ರೇಟ್‌ಗಳಿಗೆ ಪತ್ರ ಬರೆದು ಸೂಕ್ತ ನಿರ್ದೇಶನಗಳನ್ನು ನೀಡಿದ್ದಾರೆ.

<><><>

ಭಾರತೀಯ ಸೇನೆಯ ವತಿಯಿಂದ ಚಿತ್ರದುರ್ಗ ನಗರದ ಒನಕೆ ಓಬವ್ವ ಕ್ರೀಡಾಂಗಣದಲ್ಲಿ ಅಗ್ನಿವೀರ್ ನೇಮಕಾತಿ ರ್ಯಾಲಿಯು ಇದೇ 31 ರಿಂದ ನವೆಂಬರ್ 03ರವರೆಗೆ ನಡೆಯಲಿದ್ದು ಅಭ್ಯರ್ಥಿಗಳಿಗೆ ಪಾಲಿಸಬೇಕಾದ ಸೂಚನೆಗಳ ಬಗ್ಗೆ ನೇಮಕಾತಿ ರ್ಯಾಲಿಯ ಹೊಣೆ ಹೊತ್ತಿರುವ ಕರ್ನಲ್ ಪು ್ರಾಜ್ ಮಾಹಿತಿ ನೀಡಿದ್ದಾರೆ.

<><><>

ಕೊನೆಯಲ್ಲಿ ಮತೊಮ್ಮೆ ಮುಖ್ಯಾಂಶಗಳು:

- **ವಿಧಾನ ಪರಿ ತ್ತಿನ ಪದವೀಧರ ಹಾಗೂ ಶಿಕ್ಷಕರ ಕ್ಷೇತ್ರಗಳ ಚುನಾವಣೆ: ಮತದಾರರ ತೀರ್ಪನ್ನು ಗೌರವದಿಂದ ಸ್ವೀಕರಿಸುತ್ತೇವೆ – ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್.**

- **ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದಿಂದ ಲೆಕ್ಕಪರಿಶೋಧನೆಗೆ ಸಂಬಂಧಿಸಿದ ನೂತನ ಕೋರ್ಸ್ – ಸಚಿವ ಲಕ್ಷ್ಮಣ ಸವದಿ.**

- **ದಾವಣಗೆರೆ ಹಾಗೂ ಚಿತ್ರದುರ್ಗ ಜಿಲ್ಲೆಗಳಿಗೆ ಪ್ರತ್ಯೇಕ ಹಾಲು ಒಕ್ಕೂಟ 'ದಾಚಿಮುಲ್' ಸ್ಥಾಪನೆ – ಸಚಿವ ಕೆ.ಎಸ್. ಬಸವಂತಪ್ಪ.**

- **ಒಂದು ವ ್ಷದ ಬಳಿಕ ಹಾಸನದ ಅಧಿದೇವತೆ ಹಾಸನಾಂಬೆಯ ದರ್ಶನ ಇಂದು ಆರಂಭ.**

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು. ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 7 ಗಂಟೆ 35 ನಿಮಿಷಕ್ಕೆ

<><><><><><><>